# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ವಿವಿಧ ಗ್ರಾಮೀಣ ಮೂಲಭೂತ ಸೌಲಭ್ಯಗಳ ಕಾಮಗಾರಿಗಳ ಸಾಮಗ್ರಿ ಖರೀದಿಯನ್ನು ರೂ. 5.00 ಲಕ್ಷಗಳ ವೆಚ್ಚದಲ್ಲಿ ಮಾಡಲು KTPP ಅಧಿನಿಯಮ 1999ರ ಕಲಂ 4(ಜಿ) ಯಿಂದ ವಿನಾಯಿತಿ ನೀಡುವ ಬಗ್ಗೆ.

ಓದಲಾಗಿದೆ: 1. ಸರ್ಕಾರದ ಅಧೀನ ಕಾರ್ಯದರ್ಶಿ ಆರ್ಥಿಕ ಇಲಾಖೆ (ಸಂಗ್ರಹಣಾ ಕೋಶ) ಇವರು ಹೊರಡಿಸಿರುವ ಅಧಿಸೂಚನೆ ಪತ್ರದ ಸಂಖ್ಯೆ: ಆ.ಇ. 907 ವೆಚ್ಚ 12/16 ದಿನಾಂಕ: 13-01-2017.

2. ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ದಿನಾಂಕ: 18-08-2016ರಂದು ಜರುಗಿದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ನಡವಳಿಗಳು.

~~~~~~

***ಪ್ರಸ್ತಾವನೆ:***

ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯನ್ನು 2006-07ನೇ ಸಾಲಿನಿಂದ ರಾಜ್ಯದ ಎಲ್ಲಾ ಜಿಲ್ಲೆಗಳಲ್ಲಿ ಹಂತಹಂತದಲ್ಲಿ ಅನುಷ್ಠಾನಗೊಳಿಸಲಾಗುತ್ತಿದ್ದು, ಬಹುತೇಕ ಕಾಮಗಾರಿಗಳನ್ನು ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. ಸದರಿ ಕಾಮಗಾರಿಗಳಲ್ಲಿ ರೂ. 1.00 ಲಕ್ಷಕ್ಕೂ ಮೀರಿದ ಸಾಮಗ್ರಿಗಳನ್ನು KTPP ಅಧಿನಿಯಮದನ್ವಯ ಅನುಸರಿಸಿ ಖರೀದಿಸಿ ನಿರ್ವಹಿಸಲಾಗುತ್ತಿದೆ. ಈ ಪ್ರಕ್ರಿಯೆಗಳ ಅನುಸರಣೆಯಲ್ಲಿ ಸಾಮಗ್ರಿಗಳನ್ನು ಖರೀದಿಸಿ ಅನುಷ್ಠಾನ ನಿರ್ವಹಿಸಲು ವಿಳಂಬವಾಗುತ್ತಿದ್ದು ಯೋಜನೆಯ ಪ್ರಗತಿಗೆ ಹಿನ್ನಡೆಯಾಗಿರುತ್ತದೆ. ಇದಲ್ಲದೇ, ರಾಜ್ಯದಲ್ಲಿ ಶೇಕಡಾ 90ರಷ್ಟು 160 ತಾಲ್ಲೂಕುಗಳು ಬರವನ್ನು ಎದುರಿಸುತ್ತಿದ್ದು ಬರಗಾಲವನ್ನು ಸಮರ್ಪಕವಾಗಿ ಮತ್ತು ಸಮರ್ಥನಿಯವಾಗಿ ಎದುರಿಸಿ ಬಡಕೂಲಿಕಾರ್ಮಿಕರಿಗೆ ನಗರ/ಪಟ್ಟಣ ಪ್ರದೇಶಗಳಿಗೆ ಹಾಗೂ ಇತರೆ ರಾಜ್ಯಗಳಿಗೆ ವಲಸೆ ಹೋಗದಂತೆ ತಡೆಗಟ್ಟಿ ಸ್ಥಳೀಯವಾಗಿ ಉದ್ಯೋಗವನ್ನು ಒದಗಿಸುವುದು ಅವಶ್ಯಕವಾಗಿರುತ್ತದೆ. ಈ ರೀತಿ ಮಾಡಲು ಅನುಷ್ಠಾನದಲ್ಲಿ ಕಾಮಗಾರಿಗಳ ಸಾಮಗ್ರಿಗಳ ಪಡೆಯುವಿಕೆಯಲ್ಲಿ ಅನುಸರಿಸುತ್ತಿರುವ KTPP ಅಧಿನಿಯಮದ ಪ್ರಕ್ರಿಯೆಗಳಲ್ಲಿ ಆಗುತ್ತಿರುವ ವಿಳಂಬವನ್ನು ತಪ್ಪಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999ರ ಕಲಂ 4(ಜಿ)ಯಿಂದ ವಿನಾಯಿತಿ ಪಡೆಯುವುದು ಅವಶ್ಯಕವಾಗಿದೆ. ಸದರಿ ವಿಷಯದ ಗಂಭೀರ್ಯಾತೆಯನ್ನು ಪರಿಗಣಿಸಿ, ಓದಲಾದ(2)ರಲ್ಲಿ ದಿನಾಂಕ: 18-08-2016ರಂದು ಸನ್ಮಾನ್ಯ ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ನಡೆದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಸಭೆಯ ಅಧ್ಯಕ್ಷರು ನರೇಗಾ ಯೋಜನೆಯಡಿ ಅಂಗನವಾಡಿ ಕಟ್ಟಡ ಸೇರಿದಂತೆ ವಿವಿಧ ಗ್ರಾಮೀಣಾ ಮೂಲಭೂತ ಸೌಕರ್ಯ ಕಾಮಗಾರಿಗಳಿಗೆ ರೂ. 5.00 ಲಕ್ಷವರೆಗಿನ ಸಾಮಗ್ರಿಗಳ ಖರೀದಿಗೆ KTPP ಕಾಯ್ದೆಯಡಿ ವಿನಾಯಿತಿ ನೀಡುವ ಬಗ್ಗೆ ಸೂಕ್ತ ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಸಲ್ಲಿಸುವಂತೆ ಸೂಚಿಸಿರುವ ಮೇರೆಗೆ, ಪ್ರಸ್ತಾವನೆಯನ್ನು ಆರ್ಥಿಕ ಇಲಾಖೆಗೆ ಸಲ್ಲಿಸಿದ್ದು, ಪ್ರತ್ಯುತ್ತರವಾಗಿ ಆರ್ಥಿಕ ಇಲಾಖೆಯು ಓದಲಾದ(1)ರಲ್ಲಿ ದಿನಾಂಕ: 13-01-2017ರ ಅಧಿಸೂಚನೆಯ ಪತ್ರದ ಸಂಖ್ಯೆ ಆಇ 907 ವೆಚ್ಚ – 12/16ನ್ನು ಹೊರಡಿಸಿ, "ನರೇಗಾ ಯೋಜನೆಯಡಿ ವಿವಿಧ ಗ್ರಾಮೀಣ ಮೂಲಭೂತ ಸೌಕರ್ಯ ಕಾಮಗಾರಿಗಳ ಖರೀದಿಯನ್ನು ರೂ. 5.00 ಲಕ್ಷಗಳ ವೆಚ್ಚದಲ್ಲಿ ಒಂದು ವರ್ಷದ ಅವಧಿಗೆ ಕೈಗೊಳ್ಳಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999ರ ಕಲಂ 4(ಜಿ)ಯಡಿ ಪಾರದರ್ಶಕತೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಗೆ ಕಾಯ್ದೆಯಿಂದ ವಿನಾಯಿತಿ ನೀಡಿದೆ" ಎಂದು ತಿಳಿಸಿರುತ್ತದೆ. ನರೇಗಾ ಯೋಜನೆಯಡಿ ಇತರೆ ಇಲಾಖೆಗಳ ಯೋಜನೆಗಳೊಂದಿಗೆ ಒಗ್ಗೂಡಿಸುವಿಕೆಯ ಮೂಲಕ
~~~~~~

ಅನುಷ್ಠಾನಗೊಳಿಸುವ ಕಾಮಗಾರಿಗಳಲ್ಲಿ ಒಳಗೊಂಡ ಸಾಮಗ್ರಿಗಳ ಖರೀದಿಗೆ ಈ ಅಧಿನಿಯಮದ ವಿನಾಯಿತಿಯು ಅನ್ವಯವಾಗುತ್ತದೆ. ಪ್ರಯುಕ್ತ ನರೇಗಾ ಯೋಜನೆಯ ಎಲ್ಲಾ ವಿವಿಧ ಗ್ರಾಮೀಣ ಮೂಲಭೂತ ಸೌಕರ್ಯ ಕಾಮಗಾರಿಗಳ ಸಾಮಗ್ರಿ ಖರೀದಿಯನ್ನು ರೂ. 5.00 ಲಕ್ಷಗಳ ವೆಚ್ಚದಲ್ಲಿ ಒಂದು ವರ್ಷದ ಅವಧಿಗೆ ಮಾತ್ರ ಕೈಗೊಳ್ಳಲು KTPP ಅಧಿನಿಯಮದ ಕಲಂ 4(ಜಿ)ಯಿಂದ ವಿನಾಯಿತಿಯನ್ನು ನೀಡಲು ಸರ್ಕಾರವು ತೀರ್ಮಾನಿಸಿದೆ. ಆದ್ದರಿಂದ ಈ ಕೆಳಕಂಡ ಆದೇಶ.

***<u>ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 240 ಉಖಾಯೋ 2016 ಬೆಂಗಳೂರು ದಿನಾಂಕ: 04-02-2017</u>***

ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆಯಡಿ ಅನುಷ್ಠಾನಗೊಳಿಸುತ್ತಿರುವ/ಅನುಷ್ಠಾನಗೊಳ್ಳುವ ವಿವಿಧ ಗ್ರಾಮೀಣ ಮೂಲಭೂತ ಸೌಕರ್ಯ ಕಾಮಗಾರಿಗಳ ಸಾಮಗ್ರಿಗಳ ಖರೀದಿಯನ್ನು/ಪಡೆಯುವಿಕೆಗಾಗಿ ರೂ. 5.00 ಲಕ್ಷಗಳ ವೆಚ್ಚದಲ್ಲಿ ಒಂದು ವರ್ಷದ ಅವಧಿಗೆ ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999ರ ಕಲಂ 4(ಜಿ)ಯಿಂದ ವಿನಾಯಿತಿ ನೀಡಿ ತಕ್ಷಣವೇ ಇದನ್ನು ಈ ಕೆಳಕಂಡ ಷರತ್ತುಗಳ ಅನುಪಾಲನೆಗೆ ಒಳಪಟ್ಟು ಜಾರಿಗೊಳಿಸಲು ಆದೇಶಿಸಿದೆ.

1. ಉತ್ತಮ ಗುಣಮಟ್ಟದ ಕಾಮಗಾರಿಗಳನ್ನು ಸಮಂಜಸ ದರದಲ್ಲಿ ಸಂಗ್ರಹಿಸಿ ಕಾಯ್ದಿರಿಸಿಕೊಳ್ಳುವುದನ್ನು ಖಚಿತಪಡಿಸಿಕೊಳ್ಳುವುದು.
2. ನರೇಗಾ ಯೋಜನೆಯಡಿ ಸ್ವತಂತ್ರವಾಗಿ ಅನುಷ್ಠಾನಗೊಳಿಸುವ ಕಾಮಗಾರಿಗಳ ಸಾಮಗ್ರಿಗಳ ಖರೀದಿಗೆ ಮತ್ತು ಇತರೆ ಇಲಾಖೆಗಳ ಯೋಜನೆಗಳೊಂದಿಗೆ ಒಗ್ಗೂಡಿಸುವಿಕೆಯ ಮೂಲಕ ಅನುಷ್ಠಾನಗೊಳಿಸುವ ಕಾಮಗಾರಿಗಳ ಸಾಮಗ್ರಿಗಳ ಖರೀದಿಗೆ ಕ್ರಮವಹಿಸುವುದು.
3. ಆದೇಶ ಹೊರಡಿಸಿದ ದಿನಾಂಕದಿಂದ, ಈ ವಿನಾಯಿತಿಯು ಒಂದು ವರ್ಷದ ಅವಧಿಗೆ ಮಾತ್ರ ಅನ್ವಯಿಸುತ್ತದೆ.
4. ಇದರ ಸಂಬಂಧ, ಕೇಂದ್ರ ಸರ್ಕಾರ/ರಾಜ್ಯ ಸರ್ಕಾರಗಳಿಂದ ಕಾಲಕಾಲಕ್ಕೆ ಹೊರಡಿಸುವ ಆದೇಶಗಳನ್ನು/ಸುತ್ತೋಲೆಗಳನ್ನು ಅನುಸರಿಸಲು ಕ್ರಮವಹಿಸುವುದು.
5. ಅಗತ್ಯಕ್ಕೆ ಅನುಗುಣವಾಗಿ ಕಾಮಗಾರಿಗಳ ಸಾಮಗ್ರಿಗಳನ್ನು ರೂ. 5.00 ಲಕ್ಷಗಳ ವೆಚ್ಚದಲ್ಲಿ ಮಾತ್ರ ಖರೀದಿಸಲು ಕ್ರಮವಹಿಸುವುದು ಮತ್ತು ಯಾವುದೇ ಕಾರಣಕ್ಕೂ ರೂ. 5.00 ಲಕ್ಷಗಳ ಮಿತಿಯನ್ನು ಮೀರದಂತೆ ಕ್ರಮವಹಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಅಧಿಸೂಚನೆಯ ಪತ್ರದ ಸಂಖ್ಯೆ: ಆಇ 907 ವೆಚ್ಚ – 12/16 ದಿನಾಂಕ: 13-01-2017ರಲ್ಲಿ ಸಹಮತಿಯೊಂದಿಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ

27/02/2017

ಸರ್ಕಾರದ ಅಧೀನ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಗೆ:

1. ಮಹಾಲೇಖಪಾಲರು, ಕರ್ನಾಟಕ ಸರ್ಕಾರ, ಬೆಂಗಳೂರು/ಧಾರವಾಡ
2. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು

3. ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
4. ರಾಜ್ಯದ ಎಲ್ಲಾ ತಾಲ್ಲೂಕು ಪಂಚಾಯಿತಿಗಳ ಕಾರ್ಯನಿರ್ವಾಹಕ ಅಧಿಕಾರಿಗಳು.

**ಪ್ರತಿಯನ್ನು:**

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ತೋಟಗಾರಿಕೆ ಮತ್ತು ರೇಷ್ಮೆ ಕೈಗಾರಿಕೆ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ಬಹುಮಹಡಿ ಕಟ್ಟಡ, ಬೆಂಗಳೂರು
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು ಬಹುಮಹಡಿ ಕಟ್ಟಡ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಇವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳಿಗೆ.
9. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪಶು ಸಂಗೋಪನೆ ಮತ್ತು ಮೀನುಗಾರಿಕೆ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು.
10. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ, ವಿಕಾಸ ಸೌಧ, ಇವರ ಆಪ್ತ ಕಾರ್ಯದರ್ಶಿಗಳು, ಬೆಂಗಳೂರು.
11. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಅಹಾರ ಮತ್ತು ನಾಗರೀಕ ಸರಬರಾಜು ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು.
12. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಲೋಕೋಪಯೋಗಿ ಇಲಾಖೆ, ಇವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು.
13. ಸರ್ಕಾರದ ಕಾರ್ಯದರ್ಶಿಗಳು, ಕೃಷಿ ಇಲಾಖೆ ಬಹುಮಹಡಿ ಕಟ್ಟಡ, ಬೆಂಗಳೂರು.
14. ಸರ್ಕಾರದ ಕಾರ್ಯದರ್ಶಿಗಳು, ಜಲ ಸಂಪನ್ಮೂಲ ಇಲಾಖೆ (ಸಣ್ಣ ನೀರಾವರಿ), ವಿಕಾಸ ಸೌಧ, ಬೆಂಗಳೂರು.
15. ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ (ವೆಚ್ಚ), ವಿಧಾನ ಸೌಧ, ಬೆಂಗಳೂರು.
16. ಪ್ರಾದೇಶಿಕ ಆಯುಕ್ತರು ಬೆಂಗಳೂರು, ಮೈಸೂರು, ಗುಲ್ಬರ್ಗಾ, ಬೆಳಗಾಂ
17. ಎಲ್ಲಾ ಅನುಷ್ಠಾನ ಸಂಸ್ಥೆಗಳ ಮುಖ್ಯಸ್ಥರುಗಳಿಗೆ:
    i. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಅರಣ್ಯ ಪಡೆ ಮುಖ್ಯಸ್ಥರು), ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು.
    ii. ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು,
    iii. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಕಾವೇರಿ ಭವನ, ಬೆಂಗಳೂರು.
    iv. ರೇಷ್ಮೆ ಅಭಿವೃದ್ಧಿ ಆಯುಕ್ತರು, ರೇಷ್ಮೆ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
    v. ನಿರ್ದೇಶಕರು, ತೋಟಗಾರಿಕೆ ಇಲಾಖೆ, ಲಾಲ್ ಬಾಗ್ ರಸ್ತೆ, ಬೆಂಗಳೂರು.
    vi. ನಿರ್ದೇಶಕರು, ಮೀನುಗಾರಿಕೆ ಇಲಾಖೆ, ವಿ.ವಿ.ಟವರ್, ಬೆಂಗಳೂರು.
    vii. ಮುಖ್ಯ ಅಭಿಯಂತರರು (ಸಣ್ಣ ನೀರಾವರಿ) ಉತ್ತರವಲಯ ಬಿಜಾಪುರ/ದಕ್ಷಿಣವಲಯ, ಕೆ.ಆರ್.ವೃತ್ತ, ಬೆಂಗಳೂರು.
    viii. ಮುಖ್ಯ ಅಭಿಯಂತರರು ಪಂಚಾಯತ್ ರಾಜ್ ಇಂಜನಿಯರಿಂಗ್ ಇಲಾಖೆ, ಬೆಂಗಳೂರು.

ix. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕರ್ನಾಟಕ ಗ್ರಾಮೀಣ ರಸ್ತೆಗಳ ಅಭಿವೃದ್ಧಿ ಸಂಸ್ಥೆ, ಬೆಂಗಳೂರು.

x. ಆಯುಕ್ತರು ಕರ್ನಾಟಕ ಗ್ರಾಮೀಣ ನೀರು ಸರಬರಾಜು ಮತ್ತು ನೈರ್ಮಲ್ಯ, ಗ್ರಾಮೀಣ ನೀರು ಸರಬರಾಜು ವಿಭಾಗ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಕಾವೇರಿ ಭವನ, ಬೆಂಗಳೂರು

18. ಆಯುಕ್ತರು, ಪಶುಸಂಗೋಪನೆ ಇಲಾಖೆ, ವಿ.ವಿ.ಟವರ್, ಬೆಂಗಳೂರು.
19. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು
20. ಆಯುಕ್ತರು, ಗ್ರಾಮೀಣಾಭಿವೃದ್ಧಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
21. ವಿಶೇಷ ಆಯುಕ್ತರು, ಎಮ್.ಜಿ.ಎನ್.ಆರ್.ಇ.ಜಿ.ಎ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
22. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಎಲ್ಲಾ ನಿರ್ದೇಶಕರುಗಳು
23. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು
24. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್, ಗ್ರಾಮೀಣಾಭಿವೃದ್ಧಿಯ ರಾಜ್ಯ ಸಂಸ್ಥೆ, ಲಲಿತಮಹಲ್ ರಸ್ತೆ, ಮೈಸೂರು
25. ಮುಖ್ಯ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಆಯುಕ್ಥಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
26. ಜಂಟಿ ನಿರ್ದೇಶಕರು ತೋಟಗಾರಿಕೆ/ತಾಂತ್ರಿಕ/ಆಡಳಿತ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
27. ರಾಜ್ಯದ ಎಲ್ಲಾ ಜಿಲ್ಲೆಗಳ ಒಂಬುಡ್ಸ್‌ಮನ್‌ಗಳಿಗೆ
28. ಸರ್ಕಾರದ ಅಧೀನ ಕಾರ್ಯದರ್ಶಿ ಆರ್ಥಿಕ ಇಲಾಖೆ (ಸಂಗ್ರಹಣಾ ಕೋಶ), ವಿಧಾನ ಸೌಧ, ಬೆಂಗಳೂರು.
29. ವಿಶೇಷಾಧಿಕಾರಿ, ಗಣಕಕೋಶ, ಗ್ರಾಅಪ ಇಲಾಖೆ. ಇವರು ಇಲಾಖಾ ವೆಬ್ ಸೈಟ್‌ನಲ್ಲಿ ಅಳವಡಿಸಲು ಕೋರಿದೆ.
30. ಸಂಪಾದಕರು ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಇವರು ಇದನ್ನು ಸಂಚಿಕೆಯಲ್ಲಿ ಪ್ರಕಟಿಸಲು ಕೋರಿದೆ.
31. M/s Effia Technologies, ಅವರಿಗೆ www.end2endsolutions.comನಲ್ಲಿ ಪ್ರಕಟಿಸಲು/ಅಳವಡಿಸಲು ಕೋರಿದೆ.
32. ಹೆಚ್ಚಿನ ಪ್ರತಿಗಳು/ಮಹಾ ಕಡತಕ್ಕೆ